ಗುರುವಾರ 25-09-2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01-ಸಂಚಿಕೆ 61

Digital Varthe Kannada Daily Volume 01 - Issue 61 Thursday 25-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ


ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ

## ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದು ಹಾಕಲು ಚುನಾವಣಾ ಆಯೋಗ ಹೊಸ ವ್ಯವಸ್ಥೆ



ನವದೆಹಲಿ: ದೇಶಾದ್ಯಂತ ಭಾರೀ ವಿವಾದ ಸೃಷ್ಟಿಸಿರುವ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದು ಹಾಕುವ ಭಾರತೀಯ ಚುನಾವಣಾ ಆಯೋಗ ಹೊಸ ತಾಂತ್ರಿಕ ವ್ಯವಸ್ಥೆಯನ್ನು ಪರಿಚಯಿಸಿದೆ.
ಹೆಚ್ಚುತ್ತಿರುವ ದುರುಪಯೋಗವನ್ನು ತಡೆಗಟ್ಟಿ ಮತದಾರರಲ್ಲಿ ಅನುಮಾನವನ್ನು ನಿವಾರಿಸಿ ಹೆಚ್ಚು ಪಾರದರ್ಶಕತೆ ಉಂಟು ಮಾಡುವ ಸದುದ್ದೇಶದಿಂದ ಚುನಾವಣಾ ಆಯೋಗ ದುರುಪಯೋಗ ತಡೆಗಟ್ಟಲು ಇಸಿಐಎನ್ಇಟಿ ಪೋರ್ಟಲ್ ಮತ್ತು ಅರ್ಜಿಗಳಲ್ಲಿ ಇ-ಸೈನ್ ಎಂಬ ವಿನೂತನ ತಂತ್ರಜ್ಞಾನವನ್ನು ಪರಿಚಯಿಸಿದೆ.


ಇದರಿಂದಾಗಿ ಬರುವ ದಿನಗಳಲ್ಲಿ ಮತದಾರರ ಪಟ್ಟಿಯಿಂದ ಯಾರೊಬ್ಬರು ಅಷ್ಟು ಸುಲಭವಾಗಿ ತಮ ಹೆಸರುಗಳನ್ನು ತೆಗೆದು ಹಾಕುವುದಾಗಲಿ ಇಲ್ಲವೇ ಸೇರ್ಪಡೆ ಮಾಡಲು ಅವಕಾಶ ಇರುವುದಿಲ್ಲ.
ಹೊಸದಾಗಿ ಮತದಾರರಪಟ್ಟಿಗೆ ಸೇರ್ಪಡೆಯಾಗುವವರು ತಮ ಹೆಸರುಗಳನ್ನು ನೊಂದಾಯಿಸಿಕೊಳ್ಳಲು ಅರ್ಜಿ ಸಲ್ಲಿಸುವವರು ತಮ ಆಧಾರ್‌ಲಿಂಕ್ ಮಾಡಲಾದ ಫೋನ್ ಸಂಖ್ಯೆಗಳನ್ನು ಬಳಸಿಕೊಂಡು ತಮ ಗುರುತನ್ನು ಬಳಸಬೇಕಾಗುತ್ತದೆ.
ಈ ಹಿಂದೆ ಅರ್ಜಿದಾರರು ಯಾವುದೇ ಪರಿಶೀಲನೆ ಇಲ್ಲದೆ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿತ್ತು. ಇದು ಮತದಾರರ ಗುರುತಿನಚೀಟಿಯ ದುರುಪಯೋಗವಾಗುವ ಸಾಧ್ಯತೆ ಇತ್ತು. ಇದನ್ನು ಮನಗಂಡೇ ಚುನಾವಣಾ ಆಯೋಗ ಇ-ಸೈನ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ.

ಸಾಮಾನ್ಯವಾಗಿ ಅರ್ಜಿದಾರರು ಚುನಾವಣಾ ಆಯೋಗದ ಅಪ್ಲಿಕೇಷನ್‌ಗಳು ಮತ್ತು ಪೋರ್ಟಲ್‌ನಲ್ಲಿ ಅಸ್ತಿತ್ವದಲ್ಲಿರುವ ಮತದಾರರ ಫೋಟೋ ಗುರುತಿನ ಚೀಟಿ(ಎಪಿಕ್) ಸಂಖ್ಯೆಯೊಂದಿಗೆ ಫೋನ್ ಸಂಖ್ಯೆಯನ್ನು ಲಿಂಕ್ ಮಾಡಿ ಅರ್ಜಿ ಹಾಕಿದ್ದರೆ ಸಾಕಿತ್ತು.
ಇದನ್ನು ತಡೆಗಟ್ಟುವ ಉದ್ದೇಶದಿಂದಲೇ ಚುನಾವಣಾ ಆಯೋಗ ವಿನೂತನವಾದ ವ್ಯವಸ್ಥೆಯನ್ನು ಜಾರಿ ಮಾಡಿದ್ದು, ದುರುಪಯೋಗವನ್ನು ತಡೆಗಟ್ಟಲು ಸಾಧ್ಯತೆ ಇದೆ ಎಂದು ಆಯೋಗ ಹೇಳಿಕೊಂಡಿದೆ.
ಇ-ಸೈನ್ ಹೇಗೆ ಕೆಲಸ ಮಾಡುತ್ತದೆ?: ಅರ್ಜಿದಾರರು ಫಾರ್ಮ್ 6 (ಹೊಸ ಮತದಾರರ ನೋಂದಣಿಗಾಗಿ), ಅಥವಾ ಫಾರ್ಮ್ 7 (ಅಸ್ತಿತ್ವದಲ್ಲಿರುವ ಪಟ್ಟಿಗಳಲ್ಲಿ ಹೆಸರನ್ನು ಸೇರಿಸಲು/ಅಳಿಸುವುದಕ್ಕೆ ಆಕ್ಷೇಪಣೆ ಸಲ್ಲಿಸಲು) ಅಥವಾ ಫಾರ್ಮ್ 8 (ನಮೂದುಗಳ ತಿದ್ದುಪಡಿಗಾಗಿ) ಅನ್ನು ಭರ್ತಿ ಮಾಡುವ ಮೂಲಕ ಈಗ ಇ-ಸೈನ್ ಅಗತ್ಯವನ್ನು ತೆರವುಗೊಳಿಸಬೇಕಾಗುತ್ತದೆ.

ಇದರರ್ಥ ಅರ್ಜಿದಾರರು ತಮ ಅರ್ಜಿಗಾಗಿ ಬಳಸುತ್ತಿರುವ ಮತದಾರರ ಕಾರ್ಡ್‌ನಲ್ಲಿರುವ ಹೆಸರು ಅವರ ಆಧಾರ್‌ನಲ್ಲಿರುವ ಹೆಸರಿಗೆ ಸಮನಾಗಿದೆ ಮತ್ತು ಅವರು ಬಳಸುತ್ತಿರುವ ಮೊಬೈಲ್ ಸಂಖ್ಯೆಯು ಆಧಾರ್‌ಗೆ ಲಿಂಕ್ ಆಗಿದೆಯೇ ಎಂದು ಖಚಿತಪಡಿಸಿಕೊಳ್ಳುವಂತೆ ಪೋರ್ಟಲ್‌ಎಚ್ಚರಿಸುತ್ತದೆ.

## ಪದ್ಮಭೂಷಣ ಪುರಸ್ಕೃತ ಹಿರಿಯ ಸಾಹಿತಿ

# ಎಸ್.ಎಲ್. ಭೈರಪ್ಪ ಇನ್ನಿಲ್ಲ



ಬೆಂಗಳೂರು: ಕನ್ನಡ ಸಾರಸತ್ವ ಲೋಕದ ಸರಸ್ವತಿ ಪುತ್ರನೆಂದೇ ಓದುಗರ ವಲಯದಲ್ಲಿ ಗುರುತಿಸಿಕೊಂಡಿದ್ದ, ಪ್ರತಿಷ್ಠಿತ ಪದ ಭೂಷಣ ಪ್ರಶಸ್ತಿ ಪುರಸ್ಕೃತ ಡಾ.ಎಸ್.ಎಲ್.ಭೈರಪ್ಪ ಅವರು ಇಂದು ವಿಧಿವಶರಾಗಿದ್ದಾರೆ. ಕಳೆದ ಹಲವು ದಿನಗಳಿಂದ ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು, ನಗರದ ರಾಜರಾಜೇಶ್ವರಿನಗರದಲ್ಲಿರುವ ರಾಷ್ಟ್ರೋತ್ಥಾನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಗುರುವಾರ ಮಧ್ಯಾಹ್ನ ಚಿಕಿತ್ಸೆ ಫಲಕಾರಿಯಾಗದೆ ನಿಧನರಾಗಿದ್ದಾರೆ. ಮೂರು ತಿಂಗಳ ಹಿಂದೆ ಮೈಸೂರಿನಿಂದ ಬೆಂಗಳೂರಿಗೆ ಆಗಮಿಸಿದ್ದ ಅವರು ಸಂಪಾದಕರೊಬ್ಬರ ನಿವಾಸದಲ್ಲಿ ವಾಸವ್ಯವಿದ್ದರು. ಕೆಲ ದಿನಗಳ ಹಿಂದೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿದ್ದರು.

ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ನಾಳೆ ಬೆಳಗ್ಗೆಯಿಂದ ಮಧ್ಯಾಹ್ನದವರೆಗೆ ಭೈರಪ್ಪ ಅವರ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುತ್ತದೆ. ಬಳಿಕ ಮೈಸೂರಿನಲ್ಲಿ ಗುರುವಾರ ಸಂಜೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ.
ಹಾಸನ ಜಿಲ್ಲೆಯ ಚೆನ್ನರಾಯಪಟ್ಟಣದ ಸಂತೇಶಿವರದಲ್ಲಿ 1934ರ ಜುಲೈ 26ರಂದು ಜನಿಸಿದ್ದ ಅವರು, ರಾಷ್ಟ್ರಕವಿ ಕುವೆಂಪು ಅವರ ನಂತರ ಸಾಹಿತ್ಯ ವಲಯದಲ್ಲಿ ಬಹುದೊಡ್ಡ ಓದುಗರನ್ನು ಹೊಂದಿದ್ದ ಅಪರೂಪದ ಸಾಹಿತಿಯಾಗಿದ್ದರು.
ದೇಶದ 3ನೇ ಅತ್ಯುನ್ನತ ನಾಗರಿಕ ಪ್ರಶಸ್ತಿ ಎನಿಸಿದ ಪದಭೂಷಣ ಪ್ರಶಸ್ತಿಗೂ ಭಾಜನರಾಗಿದ್ದ ಅವರಿಗೆ ಪ್ರತಿಷ್ಠಿತ ಜ್ಞಾನಪೀಠ ಪ್ರಶಸ್ತಿ ಒಂದಿಲ್ಲೊಂದು ದಿನ ಸಿಕ್ಕೇ ಸಿಗುತ್ತದೆ ಎಂಬ ಓದುಗರ ನಿರೀಕ್ಷೆ ಕೊನೆಗೂ ಈಡೇರಲಿಲ್ಲ. ಅವರು ರಚಿಸಿದ್ದ ಅನೇಕ ಕೃತಿಗಳು ಇಂಗ್ಲಿಷ್‌ಗೆ ತರ್ಜುಮೆಗೊಂಡು ಪ್ರತಿಷ್ಠಿತ ಬೂಕರ್ ಪ್ರಶಸ್ತಿಯೂ ಅವರಿಗೆ ಸಿಗಲಿದೆ ಎಂದು ನಿರೀಕ್ಷೆ ಮಾಡಲಾಗಿತ್ತು. ಅದು ಕೂಡ ಅವರ ಜೀವಿತಾವಧಿಯಲ್ಲಿ ಸಾಧ್ಯವಾಗಲೇ ಇಲ್ಲ.

ಸರಸ್ವತಿ ಸಮಾನ್ ಪ್ರಶಸ್ತಿಗೆ ಭಾಜರಾಗಿದ್ದ ಭೈರಪ್ಪ ಅವರು, ಭೀಮಕಾಯ, ಬೆಳಕು ಮೂಡಿತು, ಧರ್ಮಶ್ರೀ, ದೂರ ಸರಿದರು, ಮತದಾನ, ಜಲಪಾತ, ನೆಲೆ, ಸಾಕ್ಷಿ, ಅಂಚು, ತಂತು, ಆವರಣ, ಯಾನ, ನಾಯಿ ನೆರಳು, ಗ್ರಹಣ, ದಾಟು, ಸಂಸ್ಕಾರ, ಪರ್ವ, ಗೃಹಭಂಗ, ಕವಲು, ವಂಶವೃಕ್ಷ, ನಿರಾಕರಣ, ಸಾರ್ಥ, ಅನ್ವೇಷಣ, ಉತ್ತರಕಾಂಡ ಮೊದಲಾದ ಕೃತಿಗಳ ಮೂಲಕ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ್ದರು.
ಕಾದಂಬರಿಗಳ ಮೂಲಕ ಚಿರಪರಿಚಿತರಾಗಿದ್ದ ಅವರು ತಮ ಬರವಣಿಗೆಗಳ ಮೂಲಕ ಕನ್ನಡ ಸಾಹಿತ್ಯ ಲೋಕಕ್ಕೆ ತಮದೇ ಆದ ವಿಶಿಷ್ಟ ಕೊಡುಗೆ ನೀಡಿದ್ದರು. ಕನಕಪುರದಲ್ಲಿ ನಡೆದಿದ್ದ ಅಖಿಲ ಭಾರತ ಸಾಹಿತ್ಯ ಸಮೇಳನದ ಅಧ್ಯಕ್ಷತೆಯ ಗೌರವ ಪಡೆದಿದ್ದರು. ಗಾಂಧೀಜಿಯವರ ಮೌಲ್ಯಗಳಿಂದ ಪ್ರೇರಿತರಾಗಿದ್ದ ಅವರು, ತಮ ಬರವಣಿಗೆಗಳ ಮೂಲಕ ಬಹು ದೊಡ್ಡ ಕೊಡುಗೆ ನೀಡಿದ್ದರು.

ಕನ್ನಡ ಭಾಷೆಯಲ್ಲಿರುವ ಬರೆದಿರುವ ಭೈರಪ್ಪ ಅವರ ಕೃತಿಗಳು ಇಂಗ್ಲಿಷ್ ಹಾಗೂ ಭಾರತೀಯ ಭಾಷೆಗಳಿಗೆ ಅನುವಾದಗೊಂಡು ಭಾರತೀಯ ಸಾಹಿತ್ಯದಲ್ಲೂ ಜನಪ್ರಿಯರಾಗಿದ್ದರು.
ಭಾರತ ಸರ್ಕಾರ 2023ರಲ್ಲಿ ಪದಭೂಷಣ ಪ್ರಶಸ್ತಿ ನೀಡಿ ಸನಾನಿಸಿತ್ತು. ಹುಟ್ಟೂರಿನಲ್ಲಿ ಪ್ರಾಥಮಿಕ ಶಿಕ್ಷಣ ಪಡೆದಿದ್ದ ಶ್ರೀಯುತರು ಮೈಸೂರಿನಲ್ಲಿ ಪ್ರೌಢ ಹಾಗೂ ಕಾಲೇಜು ಶಿಕ್ಷಣ ಪಡೆದಿದ್ದರು. ಸುವರ್ಣ ಪದಕದೊಂದಿಗೆ ಎಂ.ಎ ಪದವಿ ತೇರ್ಗಡೆಯಾಗಿದ್ದ ಭೈರಪ್ಪ ಅವರು ಬರೋಡಾದ ಸಯ್ಯಾಜಿರಾವ್ ವಿಶ್ವವಿದ್ಯಾಲಯದಿಂದ ಸತ್ಯ ಮತ್ತು ಸೌಂದರ್ಯ ಎಂಬ ಇಂಗ್ಲಿಷ್‌ನಲ್ಲಿ ಮಂಡಿಸಿದ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿ ಪಡೆದಿದ್ದರು.
ಭೈರಪ್ಪನವರ ಗೃಹಭಂಗ, ವಂಶವೃಕ್ಷ, ನೆಲೆ, ಸಾಕ್ಷಿ, ನಾಯಿ ನೆರಳು, ತಬ್ಬಲಿ ನೀನಾದೆ ಮಗನೇ, ದಾಟು,ಧರ್ಮಶ್ರೀ, ಪರ್ವ, ಭಿತ್ತಿ ಮೊದಲಾದ ಕಾದಂಬರಿಗಳು ಹಿಂದಿ ಮತ್ತು ಮರಾಠಿ ಭಾಷೆಯಲ್ಲೂ ಜನಪ್ರಿಯವಾಗಿವೆ.

## ಜಂಬೂ ಸವಾರಿ ವೀಕ್ಷಣೆ ಆಸನ ಸಾಮರ್ಥ್ಯ 65 ಸಾವಿರದಿಂದ ರಿಂದ 40 ಸಾವಿರಕ್ಕೆ ಇಳಿಕೆ

ಮೈಸೂರು: ಆರ್‌ಸಿಬಿ ವಿಜಯೋತ್ಸವದ ವೇಳೆ ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ಘಟನೆ ಬಳಿಕ ಎಚ್ಚೆತ್ತುಕೊಂಡಿರುವ ಸರ್ಕಾರ ಜನರ ಸುರಕ್ಷತೆಯ ಹಿನ್ನೆಲೆಯಲ್ಲಿ ಜಂಬೂ ಸವಾರಿ ಮೆರವಣಿಗೆಯ ಆಸನ ಸಾಮರ್ಥ್ಯವನ್ನು 65 ಸಾವಿರದಿಂದ 40 ಸಾವರಕ್ಕೆ ಇಳಿಸಲು ನಿರ್ಧರಿಸಿದೆ. ಅ.2 ರಂದು ಅರಮನೆ ಆವರಣದಲ್ಲಿ ನಡೆಯಲಿರುವ ಜಂಬೂ ಸವಾರಿ ಮೆರವಣಿಗೆಗೆ ಈಗಾಗಲೇ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಈ ಬಾರಿ ಆಸನಗಳ ಸಾಮರ್ಥ್ಯವನ್ನು ಇಳಕೆ ಮಾಡಿದೆ.

ಕನಿಷ್ಟ 25 ಸಾವಿರ ಆಸನಗಳನ್ನು ಕಡಿಮೆ ಮಾಡಲಾಗುವುದು. ದೊಡ್ಡ ಸಭೆಗಳನ್ನು ನಿರ್ವಹಿಸುವ ಬಗ್ಗೆ ಜಾಗೃತರಾಗಲು ಪಾಸ್‌ಗಳ ಸಂಖ್ಯೆಯನ್ನು ಕೂಡ ಕಡಿಮೆ ಮುದ್ರಿಸಲಾಗಿದೆ.
ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಸಿ.ಮಹದೇವಪ್ಪ ಅವರು ಅಧಿಕಾರಿಗಳು ಮತ್ತು ದಸರಾ ಸಮಿತಿಯ ಸಭೆ ನಡೆಸಿ ದಸರಾ ಸುರಕ್ಷತಾ ಕ್ರಮ ಹಾಗೂ ಅಗತ್ಯ ಸೂಚನೆಗಳನ್ನು ನೀಡಿದ್ದಾರೆ. ಕಳೆದ ವರ್ಷ 60 ಸಾವಿರ ಆಸನ ವ್ಯವಸ್ಥೆಗಳನ್ನು ಮಾಡಲಾಗಿತ್ತು. ಈ ಬಾರಿ 40 ಸಾವಿರ ಆಸನಗಳನ್ನು ಹಾಕಲು ನಿರ್ಧ-ರಿಸಲಾಗಿದೆ.ಜಂಬೂ ಸವಾರಿಗೆ ಹೆಚ್ಚು ಜನರು ಆಗಮಿಸುತ್ತಾರೆ. ಚಾಮುಂಡೇಶ್ವರಿ ದೇವಿಯ ಚಿನ್ನದ ಅಂಬಾರಿಯನ್ನು ವೀಕ್ಷಿಸಲು ದೇಶ-ವಿದೇಶದಿಂದಲೂ ಸಹ ಅಪಾರ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಾರೆ. ಪ್ರತಿ ವರ್ಷ ಪಾಸ್‌ಗಳ ಅವ್ಯವಸ್ಥೆ ಸಾಮರ್ಥ್ಯಕ್ಕಿಂತ ಹೆಚ್ಚಿನ ಪಾಸ್‌ಗಳನ್ನು ಮುದ್ರಿಸಲಾಗುತ್ತದೆ ಎಂಬ ದೂರುಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ಈ ವರ್ಷ ಉಪಸಮಿತಿಯು ಆಸನ ಲಭ್ಯತೆ ಇರುವಷ್ಟು ಮಾತ್ರ ಪಾಸ್‌ಗಳನ್ನು ಮುದ್ರಿಸಲು ನಿರ್ಧರಿಸಿದೆ.



## ನಿರಂತರ ಮತ್ತು ಕಠಿಣ ಪರಿಶ್ರಮದಿಂದ ಯಶಸ್ಸು ಸಾಧ್ಯ: ಚಿಕ್ಕಮಾರನಹಳ್ಳಿ ಅನಂತ್

ನೆಲಮಂಗಲ: ಈ ಸೌಂದರ್ಯ ಸಂಯುಕ್ತ ಪದವಿ ಪೂರ್ವ ಕಾಲೇಜು ಇವರ ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ವಾರ್ಷಿಕ ಶಿಬಿರವನ್ನು ಮೇಲಣ ಗವಿ ವೀರ ಸಿಂಹಾಸನ ಸಂಸ್ಥಾನ ಮಠ ಶಿವಗಂಗೆಯಲ್ಲಿ ಶಿವಗಂಗೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾದಂತಹ ಶ್ರೀಮತಿ ಎನ್ ಚೇತನ ನಾಗೇಶ್ ನಾಯಕ್ ರವರು ಗಿಡ ನೆಡುವ ಮೂಲಕ ಉದ್ಘಾಟಿಸಿದರು.

ವಿದ್ಯಾರ್ಥಿಗಳ ಜೀವನದಲ್ಲಿ ಬಹಳ ಪ್ರಮುಖವಾದಂತಹ ಬೆಟ್ಟ ಎಂದರೆ ಕಾಲೇಜು ದಿನಗಳಲ್ಲಿ ಮಾಡುವಂತಹ ಪಠ್ಯೇತರ ಚಟುವಟಿ-ಕೆಗಳು ಅದರಲ್ಲಿ ಬಹಳ ಮುಖ್ಯವಾದ ಭಾಗವೆಂದರೆ ಎನ್‌ಎಸ್‌ಎಸ್ ನ ಶಿಬಿರ ವನ್ನು ಸರಿಯಾಗಿ ಮತ್ತು ಸೂಕ್ತವಾಗಿ ಬಳಸಿಕೊಳ್ಳುವಂತಹ ಎಲ್ಲಾ ವಿದ್ಯಾರ್ಥಿಗಳು ಕೂಡ ಜೀವನದ ಉನ್ನತಮಟ್ಟಕ್ಕೇರಿ ತಮ್ಮ ಗು-ರಿಗಳನ್ನು ಸುಲಭವಾಗಿ ತಲುಪುತ್ತಾರೆ ಮತ್ತು ವಿದ್ಯಾರ್ಥಿ ಜೀವನದಲ್ಲಿ ವಿದ್ಯಾರ್ಥಿಗಳು ತಲುಪಬೇಕಾದ ಗು-ರಿಗಳನ್ನು ನಿರಂತರವಾಗಿ ಮತ್ತು ಕಠಿಣವಾಗಿ ಪರಿಶ್ರಮ ಪಟ್ಟರೆ ಯಶಸ್ಸು ಕಂಡಿತ ಎಂಬುದನ್ನು ಯುವಶಕ್ತಿಯ ರಾಜ್ಯ ಸಂಚಾಲಕರಾದಂತಹ ಚಿಕ್ಕಮಾರನಹಳ್ಳಿ ಅನಂತ್ ರವರು ಮಾತನಾಡಿದರು.



ನಮ್ಮ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಜೀವನೋಪಾಯಕ್ಕೆ ಮತ್ತು ಅವರ ಯಶಸ್ಸಿಗೆ ಬೇಕಾದಂತಹ ಎಲ್ಲಾ ಸೌಲಭ್ಯಗಳನ್ನು ಕೂಡ ಮಾಡಿಕೊಡಲಾಗುತ್ತದೆ ಮತ್ತು ಅದಕ್ಕೆ ನಿರಂತರವಾಗಿ ಶ್ರಮವನ್ನು ನಾವು ವಹಿಸುತ್ತೇವೆ ಎಂದು ಸೌಂದರ್ಯ ಶಿಕ್ಷಣ ಸಂಸ್ಥೆಯ ಟ್ರಸ್ಟಿಗಳಾದ ವರುಣ್ ಕುಮಾರ್ ಎಂ ರವರು ಹೇಳಿದರು.
ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದಂತಹ ಎನ್ ಚೇತನ ನಾಗೇಶ್ ನಾಯಕ್, ಕಾಲೇಜಿನ ಪ್ರಾಂಶುಪಾಲರಾದಂತಹ ಮಹಾಬಲೇಶ್ವರ ತುಂಗಾ, ಮಾಜಿ ಸೈನಿಕ ಶಿವು, ಉಪನ್ಯಾಸಕಾರದಂತಹ ಮಂಜುನಾಥ್, ಶಿಬಿರ ಅಧಿಕಾರಿಗಳಾದಂತಹ ವಿಜಯ್ ಮತ್ತು ಅರ್ಜುನ್ ಉಪಸ್ಥಿತರಿದ್ದರು.

## ರಸ್ತೆ ಗುಂಡಿ ಮುಚ್ಚುವ ಮೂಲಕ ವಿನೂತನವಾಗಿ ಪ್ರತಿಭಟಿಸಿ ಕಾಂಗ್ರೆಸ್ ಸರ್ಕಾರಕ್ಕೆ ಬಿಸಿಮುಟ್ಟಿಸಿದ ಬಿಜೆಪಿ

ಬೆಂಗಳೂರು: ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲಿ ಹದಗೆಟ್ಟಿರುವ ರಸ್ತೆ ಗುಂಡಿಗಳನ್ನು ಮುಚ್ಚುವ ಮೂಲಕ ಬಿಜೆಪಿ ವಿನೂತನವಾಗಿ ಪ್ರತಿಭಟನೆ ನಡೆಸಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ಬಿಸಿಮುಟ್ಟಿಸಿದೆ. ಬೆಂಗಳೂರು-ಮೈಸೂರು, ಕೋಲಾರ, ಚಿಕ್ಕಬಳ್ಳಾಪುರ, ಶಿವಮೊಗ್ಗ, ದಾವಣಗೆರೆ, ಬೆಂಗಳೂರು ದಕ್ಷಿಣ, ಹಾಸನ, ಚಿಕ್ಕಮಗಳೂರು, ಧಾರವಾಡ, ಬೆಳಗಾವಿ, ಕಲಬುರಗಿ, ಬಳ್ಳಾರಿ, ರಾಯಚೂರು ಸೇರಿದಂತೆ ಎಲ್ಲ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳು ಸೇರಿದಂತೆ 224 ವಿಧಾನಸಭಾ ಕ್ಷೇತ್ರಗಳಲ್ಲಿ ರಸ್ತೆಗುಂಡಿ ಮುಚ್ಚಿ ಸರ್ಕಾರದ ವಿರುದ್ಧ ಬಿಜೆಪಿ ಕಿಡಿಕಾರಿತು.

ಪ್ರತಿಭಟನಾ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಡಿ.ಕೆ.ಶಿವಕುಮಾರ್ ಮತ್ತು ಬೆಂಗಳೂರನ್ನು ಪ್ರತಿನಿಧಿಸುವ ಸಚಿವರ ಭಾವಚಿತ್ರಗಳನ್ನು ಹಿಡಿದು, ಮುಚ್ಚಿ ಮುಚ್ಚಿ ಗುಂಡಿ ಮುಚ್ಚಿ. ಉಳಿಸಿ ಉಳಿಸಿ ಜನರ ಪ್ರಾಣ ಉಳಿಸಿ ಎಂದು ವಿನೂತನವಾಗಿ ಪ್ರತಿಭಟನೆ ನಡೆಸಿ ಸರ್ಕಾರದ ಗಮನಸೆಳೆದರು.



ಶಿವಮೊಗ್ಗದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿ-ಜಯೇಂದ್ರ, ಬೆಂಗಳೂರಿನಲ್ಲಿ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಜಿಲ್ಲಾಧ್ಯಕ್ಷರು ಸೇ-ರಿದಂತೆ ವಿವಿಧ ಪದಾಧಿಕಾರಿಗಳು, ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡು ಸರ್ಕಾರಕ್ಕೆ ಹಿಡಿಶಾಪ ಹಾಕಿದರು.
ಬೆಂಗಳೂರಿನ ಯಲಹಂಕದಲ್ಲಿ ಶಾಸಕ ಎಸ್. ಆರ್.ವಿಶ್ವನಾಥ್ ನೇತೃತ್ವದಲ್ಲಿ ರಸ್ತೆತಡೆ ನಡೆಸಿ ಪ್ರತಿಭಟನೆ ನಡೆಸಲಾಯಿತು.

ನೂರಾರು ಸಂಖ್ಯೆಯಲ್ಲಿ ಬೆಳಗ್ಗೆಯೇ ಭಾಗಿಯಾಗಿದ್ದ ಕಾರ್ಯಕರ್ತರು ರಸ್ತೆಗುಂಡಿಗಳನ್ನು ಮುಚ್ಚಿ ಸರ್ಕಾರ ಗುಂಡಿ ಮುಚ್ಚಲು ಸಾಧ್ಯವಾಗದೆ ದಿವಾಳಿ ಸ್ಥಿತಿಗೆ ಬಂದಿದೆ ಎಂದು ಕಿಡಿಕಾರಿದರು.
ಯಲಹಂಕಾದ ಹಳೆನಗರ ಕೆಂಪೇಗೌಡ ವಾರ್ಡ್ 1ರಲ್ಲಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು ದೊಡ್ಡಬಳ್ಳಾಪುರ ಭಾಗದಿಂದ ಬರುತ್ತಿದ್ದ ಬಸ್ಸುಗಳನ್ನು ಮಾರ್ಗಮಧ್ಯೆ ತಡೆದು ಗುಂಡಿಗಳನ್ನು ಮುಚ್ಚುವವರೆಗೂ ಪ್ರಯಾಣ ನಡೆಸದಂತೆ ಒತ್ತಾಯಿಸಿದರು. ರಾಜ್ಯ ಸರ್ಕಾರ ಕಾಟಾಚಾರಕ್ಕೆ ಅವೈಜ್ಞಾನಿಕವಾಗಿ ರಸ್ತೆಯಲ್ಲಿರುವ ಗುಂಡಿಗಳನ್ನು ಮುಚ್ಚುತ್ತಿದೆ. ಕಳಪೆ ಡಾಂಬ-ರೀಕರಣದಿಂದಾಗಿ ಎಲ್ಲೆಂದರಲ್ಲಿ ಗುಂಡಿಗಳಿವೆ. ಪ್ರಯಾಣಿಕರು ರಸ್ತೆಯಲ್ಲಿ ಸಂಚರಿಸಲು ಭಯಪಡುತ್ತಿದ್ದಾರೆ. ಇತ್ತೀಚೆಗೆ ಅನೇಕ ಸಾವುನೋವು ಸಂಭವಿಸಿರುವುದು ಇದಕ್ಕೆ ಸಾಕ್ಷಿ ಎಂದು ಶಾಸಕ ವಿಶ್ವನಾಥ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಗೋಪಾಲಯ್ಯ ನೇತೃತ್ವದಲ್ಲಿ ಕಠೀರವ ಸ್ಟುಡಿಯೋ ಬಳಿ ರಸ್ತೆ ತಡೆದು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.
ರಸ್ತೆ ಗುಂಡಿಗಳ ಮುಂದೆ ಕುಳಿಯು ಬಾಯಿ ಬಾಯಿ ಬಡಿದುಕೊಳ್ಳುತ್ತಿರುವ ಪ್ರತಿಭಟನಾಕಾರರು, ತಾವೇ ಗುಂಡಿ ಮುಚ್ಚಿದರು. ಮಾಜಿ ಶಾಸಕ ನೇಲ ನರೇಂದ್ರ ಬಾಬು, ಉಪ ಮೇಯರ್ ಹರೀಶ್ ಸಹ ಗುಂಡಿ ಮುಚ್ಚುವ ಕೆಲಸ ಮಾಡಿದರು.

# ಮನೆ ಮನೆಗೆ ಸರ್ಕಾರ ಜಿಲ್ಲಾಧಿಕಾರಿ ಎ.ಬಿ ಬಸವರಾಜು

ಬೆಂ.ಗ್ರಾ.ಜಿಲ್ಲೆ.: ಮನೆ ಮನೆಗೆ ಪೋಲಿಸ್ ಅಭಿಯಾನದ ಜೊತೆಯಲ್ಲಿ ಇದೀಗ ಮನೆ-ಮನೆಗೆ ಸರ್ಕಾರ ಎಂಬ ಅಭಿಯಾನವನ್ನು ನಡೆಸಲು ಸರ್ಕಾರ ಮುಂದಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಅವರು ತಿಳಿಸಿದರು.

ಜಿಲ್ಲಾಡಳಿತ ಭವನದಭಜಿ ಲ್ಲಾಧಿಕಾ-ರಿಯವರ ಕಚೇರಿ ಸಭಾಂಗಣದಲ್ಲಿ ನಡೆದ 2025 ನೇ ಸಾಲಿನ ಮೂರನೇ ತ್ರೈಮಾಸಿಕ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ, ಪಿಇಎಂ-ಎಸ್ ಮತ್ತು ಆರ್ ಕಾಯ್ದೆ 2013 ರ ಸಮಿತಿ ಸಭೆ, ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮನೆ ಮನೆಗೆ ಕಾರ್ಯಾಂಗ ಎಂಬ ಅಭಿಯಾನದಲ್ಲಿ ಪ್ರತಿ ಮನೆಗೆ ಒಂದು ಕ್ಯೂಆರ್ ಕೋಡ್ ಅನ್ನು ಅಂಟಿಸಲಾಗುವುದು ಅದನ್ನು ಸ್ಕ್ಯಾನ್ ಮಾಡಿದರೆ ಗ್ರಾಮ ಪಂಚಾಯತಿಯಿಂದ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳ ಸಂಪರ್ಕ ಸಂಖ್ಯೆ ಸಿಗುತ್ತದೆ. ಜೊತೆಗೆ ನಿಮ್ಮ ಸಮಸ್ಯೆಯನ್ನು ಅವರಿಗೆ ಕ್ಷಣಾರ್ಧದಲ್ಲಿ ತಿಳಿಸಬಹುದು. ಇದರಿಂದ ಅಧಿಕಾ-ರಿಗಳನ್ನು ಹುಡುಕಿಕೊಂಡು ಕಚೇರಿಗಳಿಗೆ ಸುತ್ತುವುದು ತಪ್ಪುತ್ತದೆ ನಿಮ್ಮ ಸಮಸ್ಯೆಗೆ ಬೇಗನೆ ಪರಿಹಾರ ಸಿಗುತ್ತದೆ ಎಂದರು.



ಮನೆ ಮನೆಗೆ ಸರ್ಕಾರ ಅಭಿಯಾನದಡಿ ಸರ್ಕಾರದ ಕಾರ್ಯಾಂಗ ವೈಖರಿ ಸಾರ್ವಜನಿಕ-ರಿಗೆ ಇನ್ನಷ್ಟು ಹತ್ತಿರ ವಾಗಬೇಕು ಎಂಬ ಉದ್ದೇಶ. ಆರಂಭಿಕ ಹಂತದಲ್ಲಿ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕನ್ನಮಂಗಲ ಗ್ರಾಮ ಪಂಚಾಯತಿಯನ್ನು ಆಯ್ಕೆ ಮಾಡಲಾಗಿದ್ದು ಕಾರ್ಯಾರಂಭ ಮಾಡಲಾಗುತ್ತದೆ ಎಂದರು.

13 ದೌರ್ಜನ್ಯ ಪ್ರಕರಣ ದಾಖಲು ಜುಲೈ 1 ರಿಂದ ಇಲ್ಲಿಯವರೆಗೂ ಒಟ್ಟು 13 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು ಪರಿಹಾರ ಧನದ ಮಂಜೂರಾತಿ ವಿವರಗಳ ಪರಿಶೀಲನೆ ನಡೆಸಿ 13 ಪ್ರಕರಣಗಳಲ್ಲಿ ನೊಂದ 44 ಸಂತ್ರಸ್ತರಿಗೆ ಒಟ್ಟು 22.30 ಲಕ್ಷ ರೂ.ಗಳ ಪರಿಹಾರ ಧನವನ್ನು ಮಂಜೂರು ಮಾಡಲಾಗಿದೆ ಎಂದು ಸಮಾಜ ಕಲ್ಯಾಣ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಸಫಾಯಿ ಕರ್ಮಚಾ-ರಿಗಳಿಗೆ ನಿಗದಿತ ಸಮಯಕ್ಕೆ ವೇತನ ನೀಡಿ ಸಫಾಯಿ ಕರ್ಮಚಾರಿಗಳಿಗೆ ನಿಗದಿತ ಸಮಯಕ್ಕೆ ವೇತನ ಪಾವತಿಯಾಗಿಲ್ಲ. ಕೂಡಲೇ ವೇತನ ಪಾವತಿ ಮಾಡಿ ಪಾವತಿಯಲ್ಲಿ ವಿಳಂಬವಾದರೆ ಕ್ರಮ ವಹಿಸಲಾಗುವುದು. ಅವರಿಗೆ ಸಿಗಬೇಕಾದಂತಹ ನಿವೇಶನ, ಮನೆ ಒದಗಿಸಬೇಕು, ಸರ್ಕಾರದಿಂದ ಸಿಗುವಂತಹ ಸಾಲ ಸೌಲಭ್ಯ ಕಲ್ಪಿಸಿ. ಸಫಾಯಿ ಕರ್ಮಚಾರಿಗಳ ಕುಟುಂಬಗಳಿಗೆ ವ್ಯಾಪಾರ, ವ್ಯವಹಾರಕ್ಕಾಗಿ ವಿವಿಧ ಕೌಶಲ್ಯ ತರಬೇತಿ, ಮಾರ್ಗದರ್ಶನ ನೀಡಿ ಸಫಾಯಿ ಕರ್ಮಚಾ-ರಿಗಳ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದರು ಸಫಾಯಿ ಕರ್ಮಚಾರಿಗಳಿಗೆ ಕೆಲಸದ ಜೊತೆಗೆ ಆರೋಗ್ಯ ಕಾಳಜಿ ಮುಖ್ಯ, ಕೆಲಸದ ಸಂದರ್ಭದಲ್ಲಿ ಮಾಸ್ಕ್ ಧರಿಸುವುದು, ಕೈ-ಕಾಲಿಗೆ ಗ್ಲೌಸ್, ರಕ್ಷಣಾತ್ಮಕ ಬಟ್ಟೆ ಧರಿಸುವುದರ ಬಗ್ಗೆ ಅರಿವಿರುವುದಿಲ್ಲ. ಪ್ರತಿ ತಿಂಗಳು ಸಫಾಯಿ ಕರ್ಮಚಾರಿಗಳ ಆರೋಗ್ಯ ತಪಾಸಣೆ ಹಾಗೂ ಕೆಲಸದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಆಯಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾರ್ಯಾಗಾರ ಏರ್ಪಡಿಸಿ ಜಾಗೃತಿ ಮೂಡಿಸಿ ಎಂದು ಆರೋಗ್ಯ ಮತ್ತು ನಗರಾಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಸಿ.ಕೆ ಬಾಬಾ ಅವರು ಮಾತಾನಾಡಿ ಜಿಲ್ಲೆಯ ಪ್ರತಿಯೊಂದು ಪೊಲೀಸ್ ಠಾಣೆಯಲ್ಲೂ ಒಂದು ಕ್ಯೂಆರ್ ಕೋಡ್ ಅಂಟಿಸಲಾಗಿದೆ ನೀವು ಅದನ್ನು ಸ್ಕ್ಯಾನ್ ಮಾಡಿ ಅದರಲ್ಲಿ ನಿಮಗೆ ಬೇಕಾದ ಮಾಹಿತಿಯನ್ನು ಪಡೆಯಬಹುದು ಮತ್ತು ಕೆಲವು ಬಾರಿ ಪೊಲೀಸ್ ಅಧಿಕಾರಿಗಳು ದೂರು ತೆಗೆದುಕೊಳ್ಳುವುದಿಲ್ಲ ಎಂಬ ಮಾತು ಕೇಳಿ ಬರುತ್ತವೆ ಅದಕ್ಕಾಗಿ ನೀವು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ ಅದರಲ್ಲಿ ಜಿಲ್ಲೆಯ ಎಲ್ಲಾ ಪೋಲಿಸ್ ಅಧಿಕಾರಿಗಳನ್ನು ಸಂಪರ್ಕಿಸಲು ದೂರವಾಣಿ ಸಂಖ್ಯೆ ಸಿಗುತ್ತದೆ ನೀವು ಅದರ ಮೂಲಕ ನಿಮ್ಮ ಸಮಸ್ಯೆಯನ್ನು ಪರಿಹರಿಸಿಕೊಳ್ಳಬಹುದು. ಇನ್ನೂ ಮುಂದೆ ಕುಂದು ಕೊರತೆ ಸಭೆಗಳನ್ನು ಠಾಣಾ ವ್ಯಾಪ್ತಿಯಲ್ಲಿ ನಡೆಸುವುದಿಲ್ಲ ನಾವೇ ನಿಮ್ಮ ಬಳಿ ಬಂದು ಸಭೆಯನ್ನು ನಡೆಸುತ್ತೇವೆ ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಕೆ.ಎನ್.ಅನುರಾಧ, ಡಿವೈಎಸ್ಪಿ ರವಿ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಟಿ.ಎಲ್.ಎಸ್. ಪ್ರೇಮ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಜಾಗೃತಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

## ಬಡವರಿಗೆ ಶಕ್ತಿ ತುಂಬುವ ನಿಟ್ಟಿನಲ್ಲಿ ಪಂಚ ಗ್ಯಾರಂಟಿ

# ಯೋಜನೆ ಅನುಷ್ಠಾನ: ಪಾಪಣ್ಣ



ಪಾವಗಡ: ರಾಜ್ಯ ಸರ್ಕಾರವು ಅರ್ಹ ಬಡವರಿಗೆ ಆರ್ಥಿಕವಾಗಿ ಶಕ್ತಿ ತುಂಬುವ ನಿಟ್ಟಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ, ಯೋಜನೆಗಳಿಂದ ವಂಚಿತರಾದ ಅರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಯ ಪ್ರಯೋಜನ ಪಡೆಯಲು ಅಧಿಕಾ-ರಿಗಳು ಕ್ರಮಕೈಗೊಳ್ಳಬೇಕು.

ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಲಾಭವನ್ನು ಪಡೆಯಲು ಅವಕಾಶ ಮಾಡಿಕೊಡುವುದೇ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉದ್ದೇಶವಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಪಣ್ಣ ನವರು ತಿಳಿಸಿದರು
ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯಿಂದ ನಡೆದ ತ್ರೈಮಾಸಿಕ ಪ್ರಗತಿ ಪರಿಶೀಲನ ಸಭೆಯಲ್ಲಿ ವರಲಕ್ಷ್ಮಿ ಅನ್ನ ಭಾಗ್ಯ ಶಕ್ತಿ ಗೃಹಜ್ಯೋತಿಮತ್ತು ಯುವ ನಿಧಿ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಸಾರ್ವಜನಿಕರನ್ನು ತಲುಪುತ್ತಿದೆಯೇ ಎಂಬುದನ್ನು ಪರಿಶೀಲಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದ ಅವರು ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಸಮಿತಿಯ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ಬಿ.ಕೆ.ಉತ್ತಮ್, ಗ್ಯಾರಂಟಿ ಅನುಷ್ಠಾನ ಸಮಿತಿಯ ಸದಸ್ಯರುಗಳಾದ ಕೆ. ಶ್ರೀನಿವಾಸಲು, ದಿವಾಕರ್, ಉಮೇಶ್, ಡಿ.ರಂಗೇಗೌಡ, ಸುಮಾಅನಿಲ್, ಲಕ್ಷ್ಮೀ, ಎಂ.ಎಲ್.ಗೋಪಿ, ವೀರಾಂಜಿನೇಯ, ಶಂಶುದ್ದೀನ್, ತಾಲೂಕು ಪಂಚಾಯಿತಿ ವ್ಯವಸ್ಥಾಪಕರಾದ ಮಜೀದ್ ಖಾನ್ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.

# ಸಹಕಾರ ಸಂಘಗಳಲ್ಲಿ ರೈತರು

# ವಹಿವಾಟು ಮಾಡಿ :ಸುರೇಶ್



ದಾಬಸ್‌ಪೇಟೆ: ರಾಷ್ಟ್ರೀಕೃತ ಬ್ಯಾಂಕುಗಳಿಗೆ ಹೋಲಿಸಿದರೆ ಸಹಕಾರ ಸಂಘಗಳ ಮೂಲಕ ತ್ವರಿತಗತಿಯಲ್ಲಿ ಸಾಲ ಸೌಲಭ್ಯ ಪಡೆದುಕೊಳ್ಳಬಹುದಾಗಿದ್ದು, ರೈತರು ಸಹಕಾರ ಸಂಘಗಳಲ್ಲಿ ವಹಿವಾಟು ಮಾಡಬೇಕೆಂದು ಸಂಘದ ಅಧ್ಯಕ್ಷ ರಮೇಶ್ ತಿಳಿಸಿದರು.

ಸೋಂಪುರ ಹೋಬಳಿಯ ಬಿಲ್ಲನಕೋಟೆ ವಿವಿಧೋದ್ದೇಶ ಪ್ರಾಥ-ಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 2024-25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸುವುದು ಮತ್ತು ಅವರ ಏಳಿಗೆಗೆ ಶ್ರಮಿಸುವುದು ಸಹಕಾರ ಸಂಘಗಳ ಮೂಲ ಉದ್ದೇಶವಾಗಿದೆ ಎಂದರು.

ಸಂಘದ ಉಪಾಧ್ಯಕ್ಷೆ ಧನಲಕ್ಷ್ಮೀ ತುಳಸಿರಾಮು ಮಾತನಾಡಿ ಗ್ರಾಮೀಣ ಭಾಗದ ಆರ್ಥಿಕ ಬೆಳವಣಿಗೆಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ಶ್ರಮಿಸುತ್ತಿವೆ. ಸದಸ್ಯರು ತಾವು ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡಿದಲ್ಲಿ ಸಂಘ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದರು.

ಸಿಇಒ ಚಿಕ್ಕರಾಜು ಮಾತನಾಡಿ ನಮ್ಮ ಸಂಘದಲ್ಲಿ 1874 ಸದಸ್ಯ-ರಿದ್ದು, 3.65 ಕೋಟಿ ಬೆಳೆಸಾಲ, ಸ್ವಂತಬಂಡವಾಳದ ಮೇಲೆ 50 ಲಕ್ಷ ಸಾಲ ನೀಡಿದ್ದು, ಪ್ರಸಕ್ತ ವರ್ಷದಲ್ಲಿ 2.5 ಲಕ್ಷ ಲಾಭಾಂಶ ಬಂದಿದೆ ಎಂದರು. ಸಭೆಯಲ್ಲಿ ನಿರ್ದೇಶಕರುಗಳಾದ ಚನ್ನೇಗೌಡ, ಮಹೇಶಕುಮಾರ್, ವೆಂಕಟೇಶ್, ಚಿದಾನಂದಮೂರ್ತಿ, ವಿಜಯಕುಮಾರ್, ರಂಗಧಾಮೇಗೌಡ, ಕೆ.ಆರ್. ರಾಜೇಶ್ ಗೌಡ, ಕಲಾವತಿ, ಲಕ್ಷ್ಮೀನರಸಮ್ಮ, ರೇಣುಕಮ್ಮ, ಸಿಬ್ಬಂದಿ ವರ್ಗದವರಾದ ಗೋವಿಂದರಾಜು, ಗೀತಾ, ನವೀನ್ ಕುಮಾರ್ ಸೇರಿದಂತೆ ಹನುಮಂತರಾಯಪ್ಪ, ತುಳಸಿರಾಮು, ಶ್ರೀನಿವಾಸ್ ಮತ್ತಿತ್ತರಿದ್ದರು.

# ಜಿ ಎಸ್ ಟಿ ಇಳಿಕೆಮಾಡಿ ಜನಸಾಮಾನ್ಯರಿಗೆ ನವರಾತ್ರಿ ಕೊಡುಗೆ

# ನೀಡಿದ್ದಾರೆ ಮೋದಿ ಜಿ:ಸಂಸದ ಮಂಜುನಾಥ್

ಮಾಗಡಿ: ಜಿಎಸ್‌ಟಿ 2.0 ಜಾ-ರಿಯಿಂದಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಜನಸಾಮಾನ್ಯರಿಗೆ ನವರಾತ್ರಿ ಕೊಡುಗೆ ನೀಡಿದ್ದಾರೆ ಎಂದು ಸಂಸದ ಡಾ. ಮಂಜುನಾಥ್ ಹೇಳಿದರು ಪಟ್ಟಣದ ಸಿದ್ದಾರೂಡ ಭವನದಲ್ಲಿ ಮಂಗಳವಾರ ಪ್ರಧಾನ ಮಂತ್ರಿ ನರೇಂದ್ರ ಮೋದಿ 75ನೇ ಹುಟ್ಟು ಹಬ್ಬದ ಅಂಗವಾಗಿ ಬಿಜೆಪಿ ಆಯೋಜಿಸಿದ್ದ ಉಚಿತ ಆರೋಗ್ಯ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಎಸ್‌ಟಿ ಪ್ರಾರಂಭವಾಗುವ ಮೊದಲು ವಿವಿಧ ರೀತಿಯ ತೆರಿಗೆ ಹಾಕಿ ಶೇ.30ರಷ್ಟು ತೆರಿಗೆ ರೂಪದಲ್ಲಿ ವಸೂಲಿ ಮಾಡಲಾಗುತ್ತಿತ್ತು.

ಈಗ ಮೋದಿ 2017 ರಲ್ಲಿ ಜಿಎಸ್‌ಟಿ ಆರಂಭಿಸಿ ಹೊಸ ತಲೆಮಾರಿನ ಜಿಎಸ್‌ಟಿ ಜಾ-ರಿಗೊಳಿಸಿರುವುದರಿಂದ ಎಲ್ಲಾ ವರ್ಗದವ-ರಿಗೂ ಅನುಕೂಲವಾಗಲಿದೆ. ಈ ಹಿಂದೆ ಜಿಎಸ್‌ಟಿ ಶೇ.5, ಶೇ.12, ಶೇ.18 ಹಾಗೂ ಶೇ.28ರ ಬದಲಿಗೆ ಇನ್ನು ಶೇ.5 ಹಾಗೂ ಶೇ.18ರ ಸ್ತರ ಮಾತ್ರ ಇರಲಿದೆ. ಹೊಸ ನಿಯಮದಂತೆ ಶೇ.12ರಷ್ಟು ಜಿಎಸ್ಪಿ ಸ್ಲ್ಯಾಬ್ ಗೆ ಒಳಪಟ್ಟಿದ್ದ ಶೇ. 99 ಸರಕುಗಳು ಶೇ.5 ರಷ್ಟಕ್ಕೆ ಇಳಿಯಲಿದೆ. ಇದರಿಂದ ಸರಕು, ಸೇವೆಗಳ ಬೆಲೆಯಲ್ಲಿ ಗಮನಾರ್ಹ ಇಳಿಕೆಯಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ವಿತ್ತ ಸಚಿವೆ ನಿರ್ಮಲಾ ಸೀತಾರಾಮ್.



ಮಾಗಡಿಯ ಕಲ್ಯಾಗೇಟ್ ನಲ್ಲಿರುವ ಅಂಗಡಿಯೊಂದಕ್ಕೆ ತೆರಳಿದ ಸಂಸದ ಡಾ. ಮಂಜುನಾಥ್ ಕೇಂದ್ರ ಸರ್ಕಾರ ಜಿಎಸ್‌ಟಿ ಕಡಿಮೆ ಮಾಡಿರುವ ಮಾಹಿತಿ ಕುರಿತು ಮಾಲೀಕರಿಗೆ ವಿವರಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಆರ್.ರಾಘವೇಂದ್ರ ಇತರರಿದ್ದರು.

ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಜನಸಾಮಾನ್ಯ ರಿಗೆ ಜಿಎಸ್‌ಟಿ ಬಗ್ಗೆ ತಿಳಿವಳಿಕೆ ಮೂಡಿಸಬೇಕಿದೆ ಎಂದು ಹೇಳಿದರು.

ಜೀವನ ಶೈಲಿ ಬದಲಾವಣೆ, ಒತ್ತಡದ ಜೀವನ, ಆಹಾರ ಪದ್ಧತಿ, ಧೂಮಪಾನ, ಮದ್ಯಪಾನಗಳಿಂದ ಭಾರತದ ಮೊದಲ ಕಿಲ್ಲರ್‌ಹೃದಯಾಘಾತ ಮತ್ತು ಬ್ರೈನ್ ಸ್ಟೋಕ್ ಆಗಿದ್ದು, ವಾರ್ಷಿಕವಾಗಿ 30 ಲಕ್ಷ ಜನ ಇದರಿಂದ ಸಾವನ್ನಪ್ಪುತ್ತಿರುವುದು ವಿಪರ್ಯಾಸ. ಜೀವನ ಶೈಲಿ ಬದಲಾವಣೆ ಮಾಡಿಕೊಳ್ಳುವುದು ಅಗತ್ಯ. 40 ವರ್ಷ ದಾಟಿದ ಪುರುಷರು 35 ವರ್ಷ ದಾಟಿದ ಮಹಿಳೆಯರು ಕಡ್ಡಾಯವಾಗಿ ವಾರ್ಷಿಕ ತಪಾಸಣೆ ಮಾಡಿಸಿಕೊಳ್ಳಬೇಕು. ದೇಹದಲ್ಲಿ ಬೆಳವಣಿಗೆಯಾಗುತ್ತದೆ. ಈ ಬಗ್ಗೆ ಇಂತಹ ಶಿಬಿರಗಳ ಮೂಲಕ ಕಾಯಿಲೆಗಳನ್ನು ಪತ್ತೆ ಮಾಡಿ ಅದಕ್ಕೆ ಸೂಕ್ತ ಚಿಕಿತ್ಸೆ ಪಡೆದುಕೊಂಡರೆ ಆರಂಭದಲ್ಲೇ ಅದನ್ನು ತಡೆಯಬಹುದು. ಒತ್ತಡದ ಜೀವನ ಶೈಲಿಯಿಂದ ಕಾಯಿಲೆಗಳು ಹೆಚ್ಚಾಗುತ್ತಿದೆ.

ಬಿಜೆಪಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಸುತ್ತಿರುವುದು ಒಳ್ಳೆಯ ಬೆಳವಣಿಗೆ. ರಾಜರಾಜೇಶ್ವರಿ ವೈದ್ಯಕೀಯ ಆಸ್ಪತ್ರೆ ಎಲ್ಲಾ ಸಿಬ್ಬಂದಿಗೂ ಅಭಿನಂದನೆಗಳು ಎಂದು ಮಂಜುನಾಥ್ ಹೇಳಿದರು. ಸಂಸದ ಡಾ.ಮಂಜುನಾಥ್ ಹುಟ್ಟುಹಬ್ಬದ ಪ್ರಯುಕ್ತ ಬಿಜೆಪಿ ಕಾರ್ಯಕರ್ತರು ಆರೋಗ್ಯ ಶಿಬಿರದಲ್ಲಿ ಕೇಕ್ ಕತ್ತರಿಸಿ ಹುಟ್ಟಿದ ಹಬ್ಬ ಆಚರಿಸಿ ಶುಭ ಹಾರೈಸಿದರು. ಪಟ್ಟಣದ ಕಲ್ಯಾಗೇಟ್ ರಾಗಿ ಮಂಡಿ, ಸಿಮೆಂಟ್ ಅಂಗಡಿ ಹಾಗೂ ಕಾಂಡಿಮೆಂಟ್ ಅಂಗಡಿಗೆ ಸಂಸದ ಡಾ. ಮಂಜುನಾಥ್ ಭೇಟಿ ನೀಡಿ ಜಿಎಸ್‌ಟಿ ಇಳಿಸಿರುವ ಬಗ್ಗೆ ಗ್ರಾಹಕರು ಹಾಗೂ ಅಂಗಡಿ ಮಾಲೀಕರ ಜತೆ ಮಾತನಾಡಿ ಕೇಂದ್ರ ಸರ್ಕಾರದ ಕೊಡುಗೆಯನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಆನಂದ ಸ್ವಾಮಿ, ಜಿಲ್ಲಾ ಪ್ರದಾನ ಕಾರ್ಯದರ್ಶಿ ಎಂ.ಆರ್. ರಾಘವೇಂದ್ರ, ಯುವ ಮುಖಂಡರಾದ ಪ್ರಸಾದ್ ಗೌಡ್ರು, ಬಿಜೆಪಿ ತಾಲೂಕು ಅಧ್ಯಕ್ಷ ವೀರಭದ್ರಪ್ಪ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಜಗನ್ನಾಥ್ ಗೌಡ, ಪ್ರಧಾನ ಕಾರ್ಯದರ್ಶಿ ಜಯರಾಮಯ್ಯ, ಮುಖಂಡರಾದ ಚೆನ್ನಬಸವಯ್ಯ, ಶಂಕರ್, ಚಿಕ್ಕೆಗೌಡ, ಬಿಡದಿ ಪ್ರಸನ್ನ, ಕೃಷ್ಣ ಆನಂದ್, ಗೌತಮ್, ಬೋಪಣ್ಣ, ವಿಶಾಲ್ ಜೈನ್, ಭಾಸ್ಕರ್, ಬಾಲಾಜಿ, ಶಶಿ, ಕೂಟಗಲ್ ಧನುಷ್ ವೀರಾಪುರಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.